# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಬುಧವಾರ, ೧೯, ಅಕ್ಟೋಬರ್, ೨೦೨೨(ಆಶ್ವಯುಜ, ೨೭, ಶಕವರ್ಷ, ೧೯೪೪)<br>BENGALURU, WEDNESDAY, 19, OCTOBER, 2022(AASHWAYUJA, 27, SHAKAVARSHA, 1944) | ನಂ. ೫೩೪<br>No. 534 |
|---|---|---|


## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** "ಸೆಪ್ಟೆಂಬರ್ 13" (September 13)ಶೀರ್ಷಿಕೆಯ ಕನ್ನಡ ಚಲನಚಿತ್ರ ಮೇಲಿನ ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ) ಮೊತ್ತವನ್ನು ಪ್ರದರ್ಶಕರಿಗೆ ಹಿಂಪಾವತಿ ಮಾಡುವ ಮೂಲಕ ಸದರಿ ಚಲನಚಿತ್ರ ವೀಕ್ಷಕರಿಗೆ ವಿನಾಯಿತಿ ನೀಡುವ ಕುರಿತು.

**ಪ್ರಸ್ತಾವನೆ :**

ಶ್ರೀ ಐವಾನ್ ನಿಗ್ಲಿ, ನಿರ್ಮಾಪಕರು, ರೂಬಿ ಫಿಲಿಮ್ಸ್, ನಂ.113, 2ನೇ ಇ ಕ್ರಾಸ್, ಓಎಮ್‌ಬಿಆರ್ ಲೇಔಟ್, ಬಾಣಸವಾಡಿ, ಬೆಂಗಳೂರು–560043, ಇವರು ದಿನಾಂಕ:16–05–2022ರಂದು ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ದಿನಾಂಕ:04–11–2022 ರಿಂದ ಕರ್ನಾಟಕ ರಾಜ್ಯದಲ್ಲಿ ಪ್ರದರ್ಶನಗೊಳ್ಳಲಿರುವ **"ಸೆಪ್ಟೆಂಬರ್ 13" (September 13)** ಕನ್ನಡ ಚಲನಚಿತ್ರಕ್ಕೆ ಶೇಕಡ 100ರಷ್ಟು ತೆರಿಗೆ ವಿನಾಯಿತಿ ಕಲ್ಪಿಸುವಂತೆ ಮನವಿ ಮಾಡಿರುತ್ತಾರೆ. ಸದರಿ ಮನವಿ ಪತ್ರದಲ್ಲಿ ಕೋವಿಡ್ ಕಾಲದಲ್ಲಿ ದಾದಿಯವರ ಸೇವೆ, ತ್ಯಾಗ ಎತ್ತಿ ಹಿಡಿಯುವ ಆಶಯ ಈ ಚಿತ್ರದ ಕಥಾ ಹಂದರದಲ್ಲಿ ಒಳಗೊಂಡಿದ್ದು, ಇದರ ಜೊತೆಗೆ ಈ ಚಿತ್ರವು ವೈದ್ಯಕೀಯ ವಲಯದವರ ಗೌರವಾರ್ಥವನ್ನು ಸ್ಮರಿಸುವ ಬಗ್ಗೆ ಸಂದೇಶವನ್ನು ಸಾರುತ್ತದೆ ಎಂದು ತಿಳಿಸಿರುತ್ತಾರೆ.

2. ಮಾನ್ಯ ಮುಖ್ಯಮಂತ್ರಿಗಳು ಸದರಿ ಮನವಿಯನ್ನು ಪರಿಗಣಿಸಿ, ಈ ಚಿತ್ರವನ್ನು ತೆರಿಗೆ ಮುಕ್ತಗೊಳಿಸಿದರೆ, ದೇಶದ ಇನ್ನಷ್ಟು ಜನರಿಗೆ ಈ ಸಂದೇಶವನ್ನು ಮುಟ್ಟಿಸುವಲ್ಲಿ ಸಹಕಾರಿಯಾಗುವುದರಿಂದ ಸೂಕ್ತ ಆದೇಶ ಹೊರಡಿಸುವಂತೆ ನಿರ್ದೇಶನ ನೀಡಿರುತ್ತಾರೆ.

3. ಆದ್ದರಿಂದ, ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ ಆಇ 37 ಸಿಎಸ್‌ಎಲ್ 2022, ಬೆಂಗಳೂರು, ದಿನಾಂಕ:19.10.2022

ಕರ್ನಾಟಕ ರಾಜ್ಯದಾದ್ಯಂತ ಚಲನಚಿತ್ರ ಮಂದಿರಗಳು / ಮಲ್ಟಿಪ್ಲೆಕ್ಸ್‌ಗಳಲ್ಲಿ ಪ್ರದರ್ಶನಗೊಳ್ಳುವ "ಸೆಪ್ಟೆಂಬರ್ 13" ಎಂಬ ಶೀರ್ಷಿಕೆಯುಳ್ಳ ಕನ್ನಡ ಚಲನಚಿತ್ರ ಪ್ರದರ್ಶನಗಳಿಗೆ **ದಿನಾಂಕ:04–11–2022**ರಿಂದ ಆರು ತಿಂಗಳ ಅವಧಿಗೆ ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ) ಹಿಂಪಾವತಿ ಸೌಲಭ್ಯವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸರ್ಕಾರವು ನೀಡಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(ಎ) ಪ್ರದರ್ಶಕರು ಸಿನೆಮಾ ಟಿಕೆಟ್ ಮೇಲೆ ಎಸ್‌ಜಿಎಸ್‌ಟಿ ವಿಧಿಸತಕ್ಕದ್ದಲ್ಲ ಮತ್ತು ಸಂಗ್ರಹಿಸತಕ್ಕದ್ದಲ್ಲ ಹಾಗೂ ಎಸ್‌ಜಿಎಸ್‌ಟಿ ಮೊತ್ತವನ್ನು ಕಡಿತಗೊಳಿಸಿದ ದರದಲ್ಲಿಯೇ ಟಿಕೆಟ್‌ಗಳನ್ನು ಮಾರಾಟ ಮಾಡತಕ್ಕದ್ದು.

(ಬಿ) ಸರ್ಕಾರದ ಆದೇಶವು ಜಾರಿಯಲ್ಲಿರುವ ಅವಧಿಯಲ್ಲಿ **"ಸೆಪ್ಟೆಂಬರ್ 13"** ಸಿನೆಮಾ ಪ್ರದರ್ಶನದ ಪ್ರವೇಶಕ್ಕೆ ಮಾರಾಟ ಮಾಡುವ ಟಿಕೆಟ್‌ಗಳ ಮೇಲೆ **"ಕರ್ನಾಟಕ ಸರ್ಕಾರದ ಆದೇಶದನ್ವಯ ರಾಜ್ಯ ಜಿಎಸ್‌ಟಿಯನ್ನು ಸಂಗ್ರಹಿಸಿರುವುದಿಲ್ಲ"** ಎಂಬ ಪದಗಳು ಪ್ರಮುಖವಾಗಿ ಎದ್ದು ಕಾಣುವಂತೆ ಇರತಕ್ಕದ್ದು.

(ಸಿ) ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್‌ಜಿಎಸ್‌ಟಿ)ನ್ನು ಪ್ರವೇಶ ಶುಲ್ಕದ ಮೇಲೆ ವಿಧಿಸದೆ ಮತ್ತು ಗ್ರಾಹಕರಿಂದ ಸಂಗ್ರಹಿಸದಿದ್ದರೂ, ಸಿನೆಮಾ ಮಂದಿರ / ಮಲ್ಟಿಪ್ಲೆಕ್ಸ್ ಪ್ರದರ್ಶಕರು ತೆರಿಗೆ ನಮೂನೆಯನ್ನು ಸಲ್ಲಿಸಿ, ಇತರೆ ಸಿನೆಮಾಗಳಿಗೆ ಜಮೆ ಮಾಡುವ ರೀತಿಯಲ್ಲೇ ತಮ್ಮ ಸಂಪನ್ಮೂಲದಿಂದಲೇ ರಾಜ್ಯ ಜಿಎಸ್‌ಟಿ ಮೊತ್ತವನ್ನು ಜಮೆ ಮಾಡತಕ್ಕದ್ದು.

(ಡಿ) ಕಂಡಿಕೆ (ಸಿ) ಅನ್ವಯ ಪಾವತಿಸಿದ ಎಸ್‌ಜಿಎಸ್‌ಟಿ ಮೊತ್ತವನ್ನು ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ನಿಗದಿಪಡಿಸಿದ ನಮೂನೆಯಲ್ಲಿ ವ್ಯಾಪ್ತಿ ಹೊಂದಿದ ಸ್ಥಳೀಯ ಜಿಎಸ್‌ಟಿ ಕಛೇರಿ / ಉಪ ಜಿಎಸ್‌ಟಿ ಕಛೇರಿಗೆ ಅರ್ಜಿ ಸಲ್ಲಿಸಿ ಹಿಂಪಾವತಿಗೆ ಕ್ಲೇಮು ಮಾಡತಕ್ಕದ್ದು.

(ಇ) ಯುಕ್ತ ಅಧಿಕಾರಿಯು (ವ್ಯಾಪ್ತಿ ಹೊಂದಿದ ಸ್ಥಳೀಯ ಜಿಎಸ್‌ಟಿ ಅಧಿಕಾರಿ / ಉಪ ಜಿಎಸ್‌ಟಿ ಅಧಿಕಾರಿ) ತಮ್ಮ ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಜಂಟಿ ಆಯುಕ್ತರ ಮೂಲಕ ಹಿಂಪಾವತಿಗೆ ಅರ್ಹವಾದ ಮೊತ್ತದ ದೃಢೀಕರಣಕ್ಕಾಗಿ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ಇವರಿಗೆ ಶಿಫಾರಸ್ಸು ಮಾಡತಕ್ಕದ್ದು.

(ಎಫ್) ಪ್ರತಿ ಪ್ರದರ್ಶಕರಿಗೆ ಸಂಬಂಧಿಸಿದಂತೆ, ವಾಣಿಜ್ಯ ತೆರಿಗೆ ಆಯುಕ್ತರು, ಬೆಂಗಳೂರು ಇವರಿಂದ ಹಿಂಪಾವತಿಗೆ ದೃಢೀಕರಣಗೊಂಡ ಮೊತ್ತದ ವರದಿಯನ್ನು ಸ್ವೀಕರಿಸಿದ ನಂತರ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಇವರು ಬಟವಾಡೆಗೆ ವ್ಯವಸ್ಥೆ ಮಾಡತಕ್ಕದ್ದು.

(ಜಿ) ಈ ರೀತಿಯಾಗಿ ಹಿಂಪಾವತಿ ಮಾಡಲಾಗುವ ಮೊತ್ತವನ್ನು ಲೆಕ್ಕಶೀರ್ಷಿಕೆ 2220–01–105–0–01–ಚಲನಚಿತ್ರ ನಿರ್ಮಾಣ 106 (ಸಹಾಯಧನ)ಗೆ ಖರ್ಚು ಹಾಕತಕ್ಕದ್ದು.

(ಹೆಚ್) ಪ್ರದರ್ಶಕರು ಹಿಂಪಾವತಿ ಕ್ಲೇಮು ಮಾಡಲು ಅಗತ್ಯವಿರುವ ಕಾರ್ಯ ವಿಧಾನ ಕುರಿತು ವಾಣಿಜ್ಯ ತೆರಿಗೆ ಆಯುಕ್ತರು (ಕ), ಬೆಂಗಳೂರು, ಇವರು ಸುತ್ತೋಲೆ ಮೂಲಕ ಸೂಚನೆಗಳನ್ನು ನೀಡತಕ್ಕದ್ದು.

(ಐ) ಈ ಆದೇಶದ ಜಾರಿಯಲ್ಲಿ ಯಾವುದೇ ತೊಂದರೆ ಉದ್ಭವಿಸಿದಲ್ಲಿ, ಅಂತಹ ತೊಂದರೆಯನ್ನು ನಿವಾರಿಸಲು ಅವಶ್ಯಕ ಅಥವಾ ಯುಕ್ತವಾದ ಸೂಚನೆಗಳನ್ನು ಸರ್ಕಾರವು ನೀಡಬಹುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕವಿತ. ಎಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ವಾ.ತೆ–1).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE